# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 25-03-2021 ಪ್ರಶ್ನೆ ಸಂಖ್ಯೆ : 1839 (2175)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 25-03-2021

ಉತ್ತರಿಸುವ ಸಚಿವರು: ಅಬಕಾರಿ ಸಚಿವರು

ವಿಷಯ : ಅಬಕಾರಿ ಇಲಾಖೆಯಲ್ಲಿ ಖಾಲಿಯಿರುವ ಹುದ್ದೆಗಳ ಹಾಗೂ ಆಸ್ತಿ ವಿವರಗಳ ಬಗ್ಗೆ

(ಅ) ರಾಜ್ಯಾದ್ಯಂತ ಅಬಕಾರಿ ಇಲಾಖೆಯಲ್ಲಿ ವಿವಿಧ ವೃಂದಗಳಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ಅಬಕಾರಿ ಇಲಾಖೆಯಲ್ಲಿ ಸಿಬ್ಬಂದಿ ಕೊರತೆಯಿಂದ ಎದುರಾಗಿರುವ ಸಮಸ್ಯೆಗಳನ್ನು ನಿವಾರಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಇ) ಅಬಕಾರಿ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ವೃಂದದ ಅಧಿಕಾರಿಗಳ ವಿರುದ್ಧ ಎಷ್ಟು ಶಿಸ್ತಿನ ಪ್ರಕರಣಗಳು ಬಾಕಿ ಇವೆ ; ಎಷ್ಟು ಪ್ರಕರಣಗಳಲ್ಲಿ ಅಧಿಕಾರಿಗಳಿಗೆ ದಂಡನೆ ವಿಧಿಸಲಾಗಿದೆ ಹಾಗೂ ಕ್ರಮ ಕೈಗೊಳ್ಳಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಸದರಿ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ಶ್ರೇಣಿಯ ಅಧಿಕಾರಿಗಳು/ನೌಕರರು ಸರ್ಕಾರಿ ಸೇವೆಗೆ ಸೇರಿದ ದಿನದಿಂದ ಇದುವರೆಗೆ ಪ್ರತಿ ವರ್ಷವೂ ಸಲ್ಲಿಸಬೇಕಾಗಿರುವ ಆಸ್ತಿ ಮತ್ತು ಋಣ ವಿವರಗಳನ್ನು ಇಲಾಖೆ ಹಾಗೂ ಸರ್ಕಾರಕ್ಕೆ ಸಲ್ಲಿಸಿದ್ದಾರೆಯೇ; ಹಾಗೆ ಸಲ್ಲಿಸದೇ ಇರುವ ಪ್ರಕರಣವೆಷ್ಟು ಹಾಗೂ ಅಂತಹವರ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)